# ಕರ್ನಾಟಕ ಸರ್ಕಾರ
## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು-52.

ಸಂಖ್ಯೆ: ಹಿಂವಕಇ/ತರಬೇತಿ-4/ಸೇನೆ/ಸಿಆರ್-5/2019-20 ದಿನಾಂಕ: 29.07.2019

## ಪ್ರಕಟಣೆ

ಭಾರತೀಯ ಸೇನೆಗೆ ಸೇರ ಬಯಸುವ ರಾಜ್ಯದ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ ಆಯ್ಕೆಯ ಪೂರ್ವಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಮತ್ತು ತರಬೇತಿಯನ್ನು ಉಚಿತ ಊಟ ಮತ್ತು ವಸತಿ ಸೌಲಭ್ಯದೊಂದಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು 2019-20ನೇ ಸಾಲಿಗೆ ನೀಡುತ್ತಿದ್ದು, ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಗಳಿಗೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು Online ಮೂಲಕ ಆಹ್ವಾನಿಸಿದೆ.

ಸಾಮಾನ್ಯ ಅರ್ಹತೆ ಮತ್ತು ಸೂಚನೆಗಳು:

1. ವಿದ್ಯಾರ್ಹತೆ –
   a) 10ನೇ ತರಗತಿಯನ್ನು ಉತ್ತೀರ್ಣರಾಗಿದ್ದು, ಪ್ರತಿ ವಿಷಯದಲ್ಲಿ ಕನಿಷ್ಠ 33 ಅಂಕಗಳು ಮತ್ತು ಸರಾಸರಿ ಶೇ.45 ಅಂಕಗಳನ್ನು ಪಡೆದಿರಬೇಕು. ಗ್ರೇಡಿಂಗ್ ಸಿಸ್ಟಮ್ ಇದ್ದಲ್ಲಿ ಮೇಲ್ಕಂಡಂತೆ ಪ್ರತಿ ವಿಷಯದಲ್ಲಿ ಕನಿಷ್ಠ 33 ಅಂಕಗಳು ಮತ್ತು ಸರಾಸರಿ ಶೇ.45 ಅಂಕಗಳು ಇರುವಂತೆ ಗ್ರೇಡ್ ಪಡೆದಿರಬೇಕು. ಒಂದು ವೇಳೆ ಅಭ್ಯರ್ಥಿಯು ದ್ವಿತೀಯ ಪಿ.ಯು.ಸಿ/10+2 ಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿದ್ದು, ಉತ್ತೀರ್ಣರಾಗಿದ್ದಲ್ಲಿ ಪರಿಗಣಿಸಲಾಗುವುದು. ಈ ವಿದ್ಯಾಭ್ಯಾಸಕ್ಕೆ ವಯೋಮಿತಿ 17 1/2 ವರ್ಷದಿಂದ 20 1/2 ವರ್ಷಗಳು.

   b) ಅಭ್ಯರ್ಥಿಯು ದ್ವಿತೀಯ ಪಿ.ಯು.ಸಿ/10+2 (ಕಲೆ, ವಿಜ್ಞಾನ ಅಥವಾ ವಾಣಿಜ್ಯ ವಿಭಾಗಗಳಲ್ಲಿ) ನಲ್ಲಿ ಪ್ರತಿ ವಿಷಯದಲ್ಲಿ ಕನಿಷ್ಠ 40 ಅಂಕಗಳು ಮತ್ತು ಸರಾಸರಿ ಶೇ.50 ಅಂಕಗಳನ್ನು ಪಡೆದಿದ್ದಲ್ಲಿ ವಯೋಮಿತಿ 17 1/2 ವರ್ಷದಿಂದ 22 1/2 ವರ್ಷಗಳು

   c) ಕೊಡಗು ರ್‍ಯಾಲಿಗೆ ಸಂಬಂಧಿಸಿದ ಜಿಲ್ಲೆಗಳು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಮಂಡ್ಯ, ಮೈಸೂರು, ತುಮಕೂರು, ಚಾಮರಾಜನಗರ, ರಾಮನಗರ, ಚಿಕ್ಕಬಳ್ಳಾಪುರ, ಕೊಡಗು, ಚಿತ್ರದುರ್ಗ, ಹಾಸನ್ ಮತ್ತು ಬಳ್ಳಾರಿ (ಅಭ್ಯರ್ಥಿಗಳಿಗೆ 1ನೇ ಅಕ್ಟೋಬರ್ 2019 ಕ್ಕೆ ಅನ್ವಯಿಸುವಂತೆ ವಯೋಮಿತಿ ಇರುತ್ತದೆ.)

   d) ಕೊಪ್ಪಳ ರ್‍ಯಾಲಿಗೆ ಸಂಬಂಧಿಸಿದ ಜಿಲ್ಲೆಗಳು ಬೆಳಗಾವಿ, ರಾಯಚೂರು, ಬೀದರ್, ಕೊಪ್ಪಳ, ಕಲಬುರಗಿ ಮತ್ತು ಯಾದಗಿರಿ (ಅಭ್ಯರ್ಥಿಗಳಿಗೆ 1ನೇ ನವೆಂಬರ್ 2019 ಕ್ಕೆ ಅನ್ವಯಿಸುವಂತೆ ವಯೋಮಿತಿ ಇರುತ್ತದೆ.)

2. ಸದರಿ ತರಬೇತಿಯನ್ನು ಮೇಲ್ಕಂಡಂತೆ ನಡೆಯುವ ಸೈನಿಕ ರ್‍ಯಾಲಿಯನ್ನು ಗಮನದಲ್ಲಿಟ್ಟುಕೊಂಡು ನೀಡುತ್ತಿದ್ದು, ಸಂಬಂಧಿಸಿದ ಜಿಲ್ಲೆಗಳ ಖಾಯಂ ನಿವಾಸಿಯಾಗಿರುವ ಅಭ್ಯರ್ಥಿಗಳು ಮಾತ್ರ ಸದರಿ ತರಬೇತಿಗಾಗಿ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.
3. Online ಮೂಲಕ **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 08.08.2019** ಸಂಜೆ 5:00 ಗಂಟೆ
4. ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ www.backwardclasses.kar.nic.inಅನ್ನು ನೋಡುವುದು.

ಸಹಾಯ ವಾಣಿ: 080-65970004

(ಸಮಯ ಬೆಳಗ್ಗೆ 10.00 ರಿಂದ ಸಂಜೆ 5.30 ರವರೆಗೆ, ಸಾರ್ವಜನಿಕ ರಜಾ ದಿನಗಳನ್ನು ಹೊರತುಪಡಿಸಿ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.

Indian Air force